ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 306 ಗ್ರಾಪಂಕಾ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:05-07-2019

## ಅಧಿಕೃತ ಜ್ಞಾಪನ

ವಿಷಯ: ಹರಪನಹಳ್ಳಿ ತಾಲ್ಲೂಕಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ದಾವಣಗೆರೆ ಜಿಲ್ಲೆಗೆ ವರ್ಗಾವಣೆ ಮಾಡುವ ಬಗ್ಗೆ.

ಉಲ್ಲೇಖ:
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಾವಣಗೆರೆ ಜಿಲ್ಲೆ ರವರ ಪತ್ರ ಸಂಖ್ಯೆ: ಜಿಪದಾ:ಆ(2):ಗ್ರಾಪಂ:ಸಿಆರ್:129:2018-19, ದಿನಾಂಕ 11.02.2019.
2. ಕಂದಾಯ ಇಲಾಖೆಯ ಪತ್ರ ಸಂಖ್ಯೆ: ಕಂಇ 19 ಬಿಎಸ್‌ಸಿ 2019, ದಿನಾಂಕ 06.02.2019

****

ದಾವಣಗೆರೆ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕನ್ನು ಬಳ್ಳಾರಿ ಜಿಲ್ಲೆಗೆ ಸೇರ್ಪಡೆಗೊಳಿಸಿರುವುದರಿಂದ ಸದರಿ ತಾಲ್ಲೂಕಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಮಾತ್ರ ಜಿಲ್ಲೆಯ ಆಯ್ಕೆ ಬಗ್ಗೆ ಅಭಿಮತ ಕೋರಲು ಅವಕಾಶ ನೀಡಬಹುದಾಗಿದ್ದು, ಇದು ಸರ್ಕಾರದ ನಿಲುವಾಗಿರುವುದರಿಂದ ಈ ರೀತಿ ವರ್ಗಾವಣೆಗೊಂಡ ನೌಕರರ ಜೇಷ್ಠತೆಯನ್ನು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957ರ ನಿಯಮ 6ರ 2ನೇ ಪರಂತುಕದನುಸಾರ ನಿಗಧಿಪಡಿಪಡಿಸಬೇಕಾಗಿರುತ್ತದೆ. ಇದನನ್ವಯ, ಹರಪನಹಳ್ಳಿ ತಾಲ್ಲೂಕಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ದಾವಣಗೆರೆ ಜಿಲ್ಲೆಗೆ ವರ್ಗಾವಣೆ ಕೋರಿದರೆ ಅವಕಾಶ ನೀಡಲು ಉಲ್ಲೇಖ (2) ರ ಪತ್ರದಲ್ಲಿ ಅವಕಾಶ ಕಲ್ಪಿಸಲು ತಿಳಿಸಿದೆ.

ಬಳ್ಳಾರಿ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕಿನ ಈ ಕೆಳಕಂಡ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ದಾವಣಗೆರೆ ಜಿಲ್ಲೆಯಲ್ಲಿ ಖಾಲಿ ಇರುವ ಯಾವುದಾದರೊಂದು ಗ್ರಾಮ ಪಂಚಾಯತಿಗೆ ವರ್ಗಾಯಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಆದೇಶಿಸಿದೆ.

| ಕ್ರ.ಸಂ. | ಹೆಸರು ಮತ್ತು ಪದನಾಮ | ಕರ್ತವ್ಯ ನಿರ್ವಹಿಸುತ್ತಿರುವ ಗ್ರಾ.ಪಂ. | ತಾಲ್ಲೂಕು |
|---|---|---|---|
| 1 | ಶಿವಕುಮಾರ್ ಡಿ. | ತೌಡೂರು | ಹರಪನಹಳ್ಳಿ |
| 2 | ಪ್ರಭುನಾಯ್ಕ ಹೆಚ್. | ಚಿರಸ್ತಹಳ್ಳಿ | ಹರಪನಹಳ್ಳಿ |
| 3 | ಮುಕ್ತಾರ್‌ಅಲಿ ಎಸ್. | ನಿಚ್ಚವ್ವನಹಳ್ಳಿ | ಹರಪನಹಳ್ಳಿ |
| 4 | ಆರ್.ಬಿ. ಆನಂದಕುಮಾರ | ಕೆ.ಕಲ್ಲಹಳ್ಳಿ | ಹರಪನಹಳ್ಳಿ |

ಸದರಿ ನೌಕರರ ಜೇಷ್ಠತೆಯನ್ನು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957ರ ನಿಯಮ 6ರ 2ನೇ ಪರಂತುಕದನುಸಾರ ನಿಗಧಿಪಡಿಸತಕ್ಕದ್ದು.

5/7/19

(ಮುಬಾರಕ್‌ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:
1. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ದಾವಣಗೆರೆ ಮತ್ತು ಬಳ್ಳಾರಿ ಜಿಲ್ಲಾ ಪಂಚಾಯತಿಗಳು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
4. ನಿರ್ದೇಶಕರು (ಪಂ.ರಾಜ್-1), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಸಂಬಂಧಪಟ್ಟ ನೌಕರರು.
6. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾಕಡತ / ಹೆಚ್ಚುವರಿ ಪ್ರತಿ.